ನೀಡಿದ್ದರಿಂದ ಕಾಮಗಾರಿಗಳನ್ನು ಇನ್ನೂ ಪ್ರಾರಂಭಿಸಿರುವುದಿಲ್ಲ. ಈ ಲೆಕ್ಕ ಶೀರ್ಷಿಕೆಯಡಿಯಲ್ಲಿ ಬಿಡುಗಡೆಯಾಗುವ ಅನುದಾನದ ಲಭ್ಯತೆ ಮೇರೆಗೆ ಕಾಮಗಾರಿಯನ್ನು ಮುಂದುವರೆಸಲಾಗುವುದು.

749(1052) ಶ್ರೀ ಜೀವರಾಜ್ ಡಿ.ಎನ್.(ಶೃಂಗೇರಿ) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕೊಪ್ಪ ತಾಲ್ಲೂಕು ಜೈಪುರದಲ್ಲಿ ವಿದ್ಯುತ್ ವಿತರಣಾ ಕೇಂದ್ರ ನಿರ್ಮಾಣ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ:

ಆ) ಇದ್ದಲ್ಲಿ ಇದರ ಅಂದಾಜು ವೆಚ್ಚ ಎಷ್ಟು ;

ಇ) ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಕೊಪ್ಪ ತಾಲ್ಲೂಕು ಜೈಪುರದಲ್ಲಿ ಒಂದು 33/11 ಕೆ.ವಿ.ವಿದ್ಯುತ್ ವಿತರಣಾ ಕೇಂದ್ರ ನಿರ್ಮಾಣದ ಪ್ರಸ್ತಾವನೆ ಇದೆ.

ಆ) ಈ ಉದ್ದೇಶಿತ ವಿತರಣಾ ಕೇಂದ್ರ ನಿರ್ಮಾಣಕ್ಕೆ ತಗಲುವ ಅಂದಾಜು ವೆಚ್ಚ ಸುಮಾರು ರೂ.294 ಲಕ್ಷಗಳು

ಇ) ಸದರೀ ಕಾಮಗಾರಿಯನ್ನು ಕೈಗೊಳ್ಳಲು ಹಣಕಾಸು ವ್ಯವಸ್ಥೆ ಆಗಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ. ಹಣಕಾಸು ವ್ಯವಸ್ಥೆಯಾದ ನಂತರವೇ, ಈ ಕಾಮಗಾರಿಯನ್ನು ಪ್ರರಂಭಿಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಮಂಗಳೂರು ವಿದ್ಯುತ್ ಸರಬರಾಜು ಕಂಪನಿಗೆ ಸಾಧ್ಯವಾಗುತ್ತಿದೆ.

750(1053) ಶ್ರೀ ಜೀವರಾಜ್.ಡಿ.ಎನ್(ಶೃಂಗೇರಿ) : ಮಾನ್ಯ ಕಂದಾಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಕ್ರಮ ಸಾಗುವಳಿ ಸಕ್ರಮೀಕರಣಕ್ಕಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ;

ಆ) ಇದುವರೆಗೆ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು);

ಇ) ಕೊಪ್ಪ ತಾಲ್ಲೂಕು ಮೇಗುಂದ ಹೋಬಳಿ ಚೌಡಿಕಟ್ಟೆಯಲ್ಲಿ ವಾಸವಿರುವ ಕೂಲಿ ಕಾರ್ಮಿಕರ ಮನೆ ಸಕ್ರಮೀಕರಣಕ್ಕೆ ಅರ್ಜಿ ಸಲ್ಲಿಸಲಾಗಿದೆಯೇ ;

ಈ) ಈ ಮನೆಗಳ ಸಕ್ರಮೀಕರಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

ಶ್ರೀ ಎಂ.ಪಿ.ಪ್ರಕಾಶ್ (ಕಂದಾಯ ಸಚಿವರು) :

ಅ)

ನಮೂನೆ 50ರಲ್ಲಿ	ನಮೂನೆ 53 ರಲ್ಲಿ	ಒಟ್ಟು
65,087	77,178	1,42,265